**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕ:11-02-2022

## ಪ್ರಕಟಣೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅಗತ್ಯವಿರುವ ಅರ್ಹ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಸಂಬಂಧ ಆಯೋಜಿಸಲಾಗಿದ್ದ ಮೊದಲನೇ ಸುತ್ತಿನ ಕೌನ್ಸಿಲಿಂಗ್ ಪೂರ್ಣಗೊಂಡಿದ್ದು, ಬಹುತೇಕ ಅಭ್ಯರ್ಥಿಗಳು ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಉಳಿದಂತೆ, ಕೆಲವು ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತಪ್ಪು ಮಾಹಿತಿಗಳನ್ನು (ಉದಾ: ಸೇವಾ ಅನುಭವದ ವಿವರ, ಸ್ನಾತಕೋತ್ತರ ಪದವಿ ಅಂಕಗಳು, ಪಿಹೆಚ್.ಡಿ./ಎಂ.ಫಿಲ್ ವಿವರ, ಇತ್ಯಾದಿ) ನೀಡಿದ್ದು, ಈ ರೀತಿಯ ತಪ್ಪು ಮಾಹಿತಿಗಳನ್ನು ಸರಿಪಡಿಸಲು ಮನವಿಗಳನ್ನು ಸಲ್ಲಿಸಿರುತ್ತಾರೆ. ಅದರಂತೆ, ಮೊದಲನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಆಯ್ಕೆಯಾಗಿ, ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ, ತಪ್ಪು ಮಾಹಿತಿಗಳನ್ನು ಅಪ್ಲೋಡ್ ಮಾಡಿರುವ ಎಲ್ಲಾ ಅಭ್ಯರ್ಥಿಗಳಿಗೆ ಒಂದು ಬಾರಿಯ ಕ್ರಮವಾಗಿ ಅವರು ನೀಡಿರುವ ತಪ್ಪು ಮಾಹಿತಿಗಳನ್ನು ಆನ್‌ಲೈನ್ ಅರ್ಜಿಯಲ್ಲಿ ಸರಿಪಡಿಸಲು ದಿನಾಂಕ:12-02-2022 ಮತ್ತು ದಿನಾಂಕ: 13-02-2022 ರಂದು 02 ದಿನಗಳ ಕಾಲಾವಕಾಶ ನೀಡಲಾಗಿದೆ.

ಸದರಿ ಅಭ್ಯರ್ಥಿಗಳಿಗೆ ಕಾಲೇಜುಗಳಲ್ಲಿ ಲಭ್ಯವಿರುವ ಉಳಿಕೆ ಕಾರ್ಯಭಾರಕ್ಕೆ ಕೌನ್ಸಿಲಿಂಗ್ ಮೂಲಕ ಕಾಲೇಜುಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಶೀಘ್ರದಲ್ಲಿ ಕಲ್ಪಿಸಲಾಗುವುದು.

ಅಭ್ಯರ್ಥಿಗಳು ವಾಸ್ತವ ಮಾಹಿತಿಯನ್ನು ಮಾತ್ರ ನಮೂದಿಸುವುದು. ಒಂದು ವೇಳೆ ವಾಸ್ತವ ಮಾಹಿತಿಯನ್ನು ಮರೆಮಾಚಿ, ಪುನಃ ತಪ್ಪು ಮಾಹಿತಿಯನ್ನು ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಯಾವುದೇ ಕಾರಣಕ್ಕೂ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸುವುದಿಲ್ಲ.

**ನಿರ್ದೇಶಕರು**
ಕಾಲೇಜು ಶಿಕ್ಷಣ ಇಲಾಖೆ